ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

ESTD-1964

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ • ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

**ಊಟಿ ರಸ್ತೆ, ಮೈಸೂರು – 570 025**

☎: 0821-2548236 & 2548380 Fax: 0821-2548238 E-mail: jssautonomous@gmail.com www. jsscacs.edu.in

ಸಂಖ್ಯೆ: ಜೆಎಸ್ಎಸ್‌ಸಿಎಂ/267/2023-24 ದಿನಾಂಕ: 20.05.2023

ಗೆ

ಮಾನ್ಯರೆ,

ವಿಷಯ:- ಕಾಲೇಜಿನ ಹಿರಿಯ ವಿದ್ಯಾರ್ಥಿಗಳ ಸಮಾವೇಶದಲ್ಲಿ ಭಾಗವಹಿಸುವ ಬಗ್ಗೆ.

*****

ಸುತ್ತೂರು ಶ್ರೀಮಠದ 23ನೆಯ ಪೀಠಾಧಿಪತಿಗಳಾಗಿದ್ದ ಶ್ರೀ ಮನ್ಮಹಾರಾಜ ರಾಜಗುರುತಿಲಕ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ದೂರದರ್ಶಿತ್ವದ ಫಲವಾಗಿ ಜೆಎಸ್ಎಸ್ ಮಹಾವಿದ್ಯಾಪೀಠದ ವತಿಯಿಂದ ಮೈಸೂರಿನ ರಾಮಾನುಜ ರಸ್ತೆಯಲ್ಲಿ 1964 ರಲ್ಲಿ ಪ್ರಾರಂಭವಾದ ಕಾಲೇಜನ್ನು 1993 ರಲ್ಲಿ ಮೈಸೂರಿನ ಊಟಿ ರಸ್ತೆಗೆ ಸ್ಥಳಾಂತರಿಸಲಾಯಿತು. 52 ವಿದ್ಯಾರ್ಥಿಗಳಿಂದ ಪ್ರಾರಂಭವಾದ ಈ ಕಾಲೇಜಿನಲ್ಲಿ ಇಂದು ಪಿಯುಸಿ, ಪದವಿ, ಸ್ನಾತಕೋತ್ತರ ಹಾಗೂ ಸಂಶೋಧನ ಕೇಂದ್ರಗಳಿದ್ದು 3500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಕಾಲೇಜಿನ ಸುವರ್ಣ ಮಹೋತ್ಸವವನ್ನು 2015 ರಲ್ಲಿ ಆಚರಿಸಿ, 59 ವರ್ಷಗಳ ಅವಧಿಯಲ್ಲಿ ಉತ್ತಮ ಸೇವೆ ಸಲ್ಲಿಸಿ ಮೈಸೂರು ವಿಶ್ವವಿದ್ಯಾನಿಲಯ, ಯುಜಿಸಿ ಹಾಗೂ ನ್ಯಾಕ್ ಸಂಸ್ಥೆಗಳ ಪ್ರಶಂಸೆಗೆ ಪಾತ್ರವಾಗಿದೆ.

ಜಗದ್ಗುರುದ್ವಯರ ಕೃಪಾಶೀರ್ವಾದದ ಫಲವಾಗಿ ಇಂದು ಕಾಲೇಜಿನಲ್ಲಿ 9 ವಿಷಯಗಳಲ್ಲಿ Ph.D, 15 PG, 21 UG ಪ್ರೋಗ್ರಾಂಗಳಿದ್ದು, 2021 ರಿಂದ ಜೆಎಸ್ಎಸ್ ಮಹಾವಿದ್ಯಾಪೀಠದ ವತಿಯಿಂದ ಕಾಲೇಜಿನಲ್ಲಿ ಸಮುದಾಯ ಬಾನುಲಿ ಕೇಂದ್ರ ಕಾರ್ಯನಿರ್ವಹಿಸುತ್ತಿದೆ.

ತಾವು ಈ ಕಾಲೇಜಿನ ಹಿರಿಯ ವಿದ್ಯಾರ್ಥಿಗಳಾಗಿರುವುದು ತುಂಬಾ ಸಂತೋಷದ ಸಂಗತಿಯಾಗಿದೆ. ಹಿರಿಯ ವಿದ್ಯಾರ್ಥಿಗಳ ಸಮಾವೇಶವನ್ನು ದಿನಾಂಕ 28.05.2023 ರಂದು ಬೆಳಗ್ಗೆ 11.00 ಗಂಟೆಗೆ ಏರ್ಪಡಿಸಲಾಗಿದೆ. ಕಾಲೇಜಿನ ಹಿರಿಯ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸಿ ತಮ್ಮ ಹಳೆಯ ನೆನಪುಗಳನ್ನು ಪರಸ್ಪರ ವಿನಿಮಯ ಮಾಡಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ಅಂತೆಯೆ ಕಾಲೇಜಿನ ಮುಂದಿನ ಸರ್ವತೋಮುಖ ಬೆಳವಣಿಗೆಗೆ ತಮ್ಮಿಂದ ಸೂಕ್ತ ಸಲಹೆ, ಸಹಕಾರ ಹಾಗೂ ಮಾರ್ಗದರ್ಶನವನ್ನು ಕೋರುತ್ತಿದ್ದೇವೆ. ಆದುದರಿಂದ ತಾವು ದಯಮಾಡಿ ತಪ್ಪದೇ ಈ ಸಮಾವೇಶದಲ್ಲಿ ಪಾಲ್ಗೊಳ್ಳಬೇಕೆಂದು ಮತ್ತು ಈ ವಿಷಯವನ್ನು ತಮಗೆ ಗೊತ್ತಿರುವ ಇನ್ನಿತರ ಸಹಪಾಠಿಗಳಿಗೆ ತಿಳಿಸಿ ಅವರನ್ನು ಸಹ ಕರೆದುಕೊಂಡು ಬಂದು ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ಕೋರುತ್ತೇನೆ.

ಪ್ರಾಂಶುಪಾಲರು